**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ.ರವರ ನ್ಯಾಯಾಲಯ,**
**ಹೆಚ್.ಡಿ.ಕೋಟೆ**

**ಸಿ.ಸಿ. ನಂ. 324/2017**

ಫಿರ್ಯಾದಿ : ಸರ್ಕಾರದ ಪರವಾಗಿ ಬೀಚನಹಳ್ಳಿ ಪೋಲೀಸ್ ಠಾಣೆ

– ವಿರುದ್ಧ –

ಆರೋಪಿ : ರಾಮಸ್ವಾಮಿ ಬಿನ್ ಸಿದ್ದೇಗೌಡ
51 ವರ್ಷ, ವಾಸಃ ಮಗ್ಗೆ ಗ್ರಾಮ,
ಹೆಚ್.ಡಿ. ಕೋಟೆ ತಾಲ್ಲೂಕು,
ಮೈಸೂರು ಜಿಲ್ಲೆ.

## ದೋಷಾರೋಪಣೆ

ಶ್ರೀ. ಸುರೇಶ ಎಸ್.ಎನ್., ಬಿ.ಎ.ಎಲ್., ಎಲ್.ಎಲ್.ಬಿ,, ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ., ಹೆಚ್.ಡಿ.ಕೋಟೆ ಆದ ನಾನು ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕಃ 01.10.2016 ರಂದು ಸಂಜೆ 7.30 ಗಂಟೆ ಸಮಯದಲ್ಲಿ ಬೀಚನಹಳ್ಳಿ ಪೋಲೀಸ್ ಠಾಣಾ ಸರಹದ್ದು, ಮೈಸೂರು–ಮಾನಂದವಾಡಿ ಮುಖ್ಯರಸ್ತೆಯಲ್ಲಿ ಮೇಲ್ಕಂಡ ಆರೋಪಿಯಾದ ನೀವು ನಿಮ್ಮ ಬಾಬ್ತು ಗ್ರೇ ಕಲರ್ ಮಾರುತಿ ಕಾರ್ ನಂ.ಕೆಎ–09–ಎನ್–1742 ರಲ್ಲಿ ಯಾವುದೇ ಪರವಾನಗಿ ಪಡೆಯದೆ ರೂ.1805/– ಮೌಲ್ಯದ 90 ಎಂ.ಎಲ್.ನ ತಲಾ ರೂ.26.54 ಬೆಲೆಯುಳ್ಳ ಒರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿಯ 68 ಟೆಟ್ರಾ ಪ್ಯಾಕೆಟ್ ಗಳನ್ನು ಅಕ್ರಮವಾಗಿ ಲಾಭ ಹೊಂದುವ ಉದ್ದೇಶದಿಂದ ಸಾರ್ವಜನಿಕರಿಗೆ ಅಕ್ರಮವಾಗಿ ಹೆಚ್ಚಿನ ಬೆಲೆಗೆ

ಮಾರಾಟ ಮಾಡಲು ಸಾಗಾಣಿಕೆ ಮಾಡುತ್ತಿದ್ದು, ಆ ಮೂಲಕ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯಿದೆ ಕಲಂ 32, 34 ರಡಿ ಶಿಕ್ಷಾರ್ಹ ಅಪರಾಧವನ್ನು ನನ್ನ ಅಧಿಕಾರ ವ್ಯಾಪ್ತಿಯ ಪರಿಮಿತಿಯೊಳಗೆ ಮಾಡಿರುತ್ತೀರಿ.

ಈ ಮೇಲಿನ ದೋಷಾರೋಪಣೆಗಳಿಗಾಗಿ ಆರೋಪಿತರಾದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೊಳಪಡತಕ್ಕದೆಂದು ನಿರ್ದೇಶಿಸಿರುತ್ತೇನೆ.

ಪ್ರಶ್ನೆ-1 : ಮೇಲೆ ಓದಿ ಹೇಳಿದ ಆರೋಪಣೆಯನ್ನು ಕೇಳಿ ತಿಳಿದುಕೊಂಡಿದ್ದೀರಾ?

ಉತ್ತರ

ಪ್ರಶ್ನೆ-2:ಈ ಆರೋಪಣೆಯನ್ನು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆಯಾಗಬೇಕೆನ್ನುವಿರೋ?

ಉತ್ತರ

ಈ ಮೇಲಿನ ದೋಷಾರೋಪಣೆಗಳಿಗಾಗಿ ಆರೋಪಿತರಾದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೊಳಪಡತಕ್ಕದೆಂದು ನಿರ್ದೇಶಿಸಿರುತ್ತೇನೆ.

(ಆರೋಪಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿ ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ 18.06.2022

(ಸುರೇಶ ಎಸ್.ಎನ್.)
ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ
ಹೆಚ್.ಡಿ. ಕೋಟೆ.